ಅ) 1990–91ನೇ ಸಾಲಿನ ಚಾಮುಂಡಿ ಮೆಷಿನ್ ಟೂಲ್ಸ್ ನಿಯಮಿತದ 15ನೇ ವಾರ್ಷಿಕ ವರದಿ ಹಾಗೂ

ಆ) 1990–91ನೇ ಸಾಲಿನ ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಹೂಡಿಕೆ ಮತ್ತು ಅಭಿವೃದ್ಧಿ ನಿಗಮ ನಿಯಮಿತದ 27ನೇ ವಾರ್ಷಿಕ ವರದಿ;

ಈ) 1989–90ನೇ ಸಾಲಿನ ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 14ನೇ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಸಭೆಯ ಮುಂದಿಡುವುದು.

3. ಶ್ರೀ ಎಂ. ವೀರಪ್ಪ ಮೊಯಿಲಿ - (ಶಿಕ್ಷಣ ಸಚಿವರು) ಶ್ರೀ ಮಲ್ಲಾರಗೌಡ ಎಸ್. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು) ಅವರ ಪರವಾಗಿ.

1980 ನೇ ಸಾಲಿನ ಕರ್ನಾಟಕ ಅಚ್ಚುಕಟ್ಟು ಪ್ರದೇಶಾಭಿವೃದ್ಧಿಯ ಅಧಿನಿಯಮದ 25ನೇ ಕಲಮಿನ ಮೇರೆಗೆ ;

ಅ) 1990–91ನೇ ಸಾಲಿನ ಬೆಳಗಾವಿ ಜಿಲ್ಲೆಯ ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ಆಡಳಿತ ವರದಿ;

ಆ) 1990–91ನೇ ಸಾಲಿನ ಮುನಿರಾಬಾದ್ ತುಂಗಭದ್ರಾ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿಗಳನ್ನು ಸಭೆಯ ಮುಂದಿಡುವುದು.

ಉಪಾಧ್ಯಕ್ಷರೆಯವರು - ಮಂಡಿಸಲಾಯಿತು.

ಚುನಾವಣಾ ಪ್ರಸ್ತಾವಗಳು

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ) :–

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 265 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೊರುತ್ತೇನೆ.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 271 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆ ನಿಯಮಗಳ 272(1) ನಿಯಮದ ಅನುಸಾರವಾಗಿ ಈ ಸಭೆ ಹಕ್ಕು ಭಾದ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 277(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 282(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಋೂ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 286ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಹಾಗೂ ಅನುಸೂಚಿತ ವರ್ಗಗಳ ಕಲ್ಯಾಣ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿ ನಿಯಮಗಳ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 353(2)ನೇ ನಿಯಮದ ಅನುಸಾರವಾಗಿ ಈ ಸಭೆ ವಸತಿ ಸೌಕರ್ಯಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಲು ಅನುಮತಿ ಕೋರುತ್ತೇನೆ ಮತ್ತು

ಐ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮಂಗಳೂರು ವಿಶ್ವವಿದ್ಯಾಲಯದ ಸೆನೆಟ್‌ಗೆ ಐದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಕೋರುತ್ತೇನೆ.

ಉಪಸಭಾಪತಿಯವರು :- ಈಗ ಚುನಾವಣಾ ಪ್ರಸ್ತಾವವನ್ನು ಮತಕ್ಕೆ ಹಾಕುತ್ತೇನೆ.

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿ ಹನ್ನೆರಡು ಜನ ಸದಸ್ಯರನ್ನು ಚುನಾಯಿಸುವುದು.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸುವುದು.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 272(1) ನಿಯಮದ ಅನುಸಾರವಾಗಿ ಈ ಸಭೆ ಹಕ್ಕು ಭಾದ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸವುದು.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 277 (1)ನೇ ನಿಯಮದ ಅನುಸಾರವಾಗಿ ಸಭೆ ಅಧೀನ ಶಾಸನ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 282(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸುವುದು.

ಖೂ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 286ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಹಾಗೂ ಅನುಸೂಚಿತ ವರ್ಗಗಳ ಕಲ್ಯಾಣ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸುವುದು.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿ ನಿಯಮಗಳ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸುವುದು.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 353(2)ನೇ ನಿಯಮದ ಅನುಸಾರವಾಗಿ ಈ ಸಭೆ ವಸತಿ ಸೌಕರ್ಯಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಐ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮಂಗಳೂರು ವಿಶ್ವವಿದ್ಯಾಲಯದ ಸೆನೆಟ್‌ಗೆ ಐದು ಜನ ಸದಸ್ಯರನ್ನು ಚುನಾಯಿಸುವುದು.

(ಪ್ರಸ್ತಾವನೆಗೆ ಅನುಮೋದನೆ ದೊರಕಿದೆ)

ಅಧ್ಯಕ್ಷರ ಅನುಮತಿ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು.

1. ಬೆಂಗಳೂರಿನ ಬಾಗಲೂರು ಬಡಾವಣೆಯಲ್ಲಿ ಕಳ್ಳಭಟ್ಟಿ ಸೇವನೆಯಿಂದ ಮರಣ.

+ ಶ್ರೀ ಎಸ್.ಎಂ. ಯಾಹ್ಯಾ : ಅಧ್ಯಕ್ಷೀಣಿಯವರೇ ನಾನು ನಿಮಗೊಂದು ಕಾಗದ ಸಹ ಬರೆದಿದ್ದೇನೆ. ಕಳ್ಳಭಟ್ಟಿ ದುರಂತದಲ್ಲಿ ಹಲವಾರು ಜನ ಬಾಗಲೂರು ಬಡಾವಣೆ ಸ್ಲಂನಲ್ಲಿ ಸತ್ತು ಹೋಗಿದ್ದಾರೆ. ನಾನೂ ಸಹ ನಿನ್ನೆ ಆ ಏರಿಯಾಕ್ಕೆ ಹೋಗಿದ್ದೆ ಆ ಮೇಲೆ ಆಸ್ಪತ್ರೆಗೆ ಹೋಗಿದ್ದೆ. ಬಾಗಲೂರು ಬಡಾವಣೆ ಎಂದರೆ ಭಾರತದ ದೊಡ್ಡ ಒಂದು ಸ್ಲಂ. ಅದರ ವಿಚಾರ ನಾನು ಈ ಸಭೆಯಲ್ಲೇ ಹಲವಾರು ಬಾರಿ ಹೇಳಿದ್ದೇನೆ. ಅಲ್ಲಿರುವ ಜನರು ಯಾವ ರೀತಿಯಲ್ಲಿ ಇರುತ್ತಾರೋ ಎಂದು ಹೇಳುವುದೇ ಬಹಳ ಕಷ್ಟದ ಕೆಲಸ. ಇಂತಹ ಒಂದು ದುರಂತ 1981 ರಲ್ಲಿ ಜುಲೈನಲ್ಲಿ ಆಗಿತ್ತು, ಆಗ 336 ಜನ ಕಳ್ಳಭಟ್ಟಿ ಸರಾಯಿ ಕುಡಿದು ಸತ್ತುಹೋಗಿದ್ದರು. ಅನಂತರ ಪುನಃ ಅದೇ ಜಾಗದಲ್ಲಿ ಈ ಸಲ ಸಹ 10–12 ಜನ ಸತ್ತುಹೋಗಿದ್ದಾರೆ. ಹಲವಾರು ಜನ ಆಸ್ಪತ್ರೆಯಲ್ಲಿದ್ದಾರೆ, ನಾನು ನಿನ್ನೆ ಆಸ್ಪತ್ರೆಗೆ ಹೋಗಿ ನೋಡಿಬಂದೆ. ಒಬ್ಬೊಬ್ಬ ಅಧಾರಿಟಿ ಒಂದೊಂದು ಲೆಕ್ಕ ಕೊಡುತ್ತಾರೆ. ನಾನು ಅಲ್ಲಿ ಹೋದಾಗ ಹೇಳಿದರು, 18 ಜನ ಆಸ್ಪತ್ರೆಗೆ ಬಂದಿದ್ದರು 18 ರಲ್ಲಿ 6 ಜನ ಸತ್ತು 4 ಜನ ಓಡಿಹೋಗಿದ್ದಾರೆ, ಆ ಮೇಲೆ 8 ಜನರಲ್ಲಿ ಒಬ್ಬರು ಸೀರಿಯಸ್ ಇದ್ದಾರೆಯ ಆಸ್ಪತ್ರೆಯಲ್ಲಿ ಹೇಳಿದರು. ಈ ಪ್ರಶ್ನೆ ಏನೆಂದರೆ 4 ಜನರಲ್ಲಿ ಪ್ರಾಮುಖ್ಯವಾದವರು ಮೇಲು ಅಂತ ಅವರು ಓಡಿಹೋಗಿದ್ದಾರೆ ಅವರು ಯಾವಾಗ ಓಡಿಹೋಗಿದ್ದಾರೆಂದರೆ ನಮ್ಮ ಸ್ನೇಹಿತ ಮಾನ್ಯ ಧರ್ಮಸಿಂಗರು ಹೋಂ ಮತ್ತು ಏಕ್ಸೈಜ್ ಮಿನಿಸ್ಟರ್. ಎರಡೂ ಜವಾಬ್ದಾರಿಕೆಯನ್ನು ಹೊಂದಿದವರು ಅಲ್ಲಿ ಹೋದ ನಂತರ, ಅದೇ 18ವರೆ ಗಂಟೆಗೆ ಅಲ್ಲಿದ್ದರು. In his presence itself he ran away from the hospital. It is a very serious matter. I don't demand that Shri Dharam Singh should resign. He is a good friend. He can always say when 336 people died in July 1981, none resigned. The question of resignation would not arise and I would not demand it also but why it is happening? Where is our administration? What is our efficiency? A man could run away in the presence of the Home Minister